ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 577 (679)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕಸ ವಿಲೇವಾರಿ ಕುರಿತು

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡಲು ಎಂದಿನಿಂದ ಗುತ್ತಿಗೆಯನ್ನು ನೀಡಲಾಗಿದೆ; ಗುತ್ತಿಗೆಯ ಅವಧಿಯ ಮುಗಿದಿದೆಯೇ; ಅದೇ ಗುತ್ತಿಗೆದಾರರನ್ನು ಮುಂದುವರೆಸಲು ನಿಯಮಗಳಲ್ಲಿ ಅವಕಾಶವಿದೆಯೇ; ಇಲ್ಲವಾದಲ್ಲಿ ನಿಯಮ ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ದಿನಾಂಕ : 01-01-2018 ರಿಂದ 30-11-2020ರ ವರೆಗೆ ಕಸ ಸಂಗ್ರಹಣಾ ಕೇಂದ್ರಕ್ಕೆ ಪ್ರತಿ ದಿನ ಯಾವ ವಾಹನದಲ್ಲಿ ಎಷ್ಟು ಟನ್ ಕಸವು ಬಂದಿದೆ; ತೂಕವನ್ನು ಪರಿಶೀಲಿಸಲಾಗಿದೆಯೇ; (ದಿನಾಂಕ, ಪ್ರತಿ ವಾಹನದ ತೂಕದ ರಸೀದಿ ವಿವರ, ವಾಹನದ ಮಾದರಿ, ವಾಹನಗಳ ಸಂಖ್ಯೆ, ತೂಕ ಪರಿಶೀಲಿಸಿದ ಸಿಬ್ಬಂದಿಯ ಹೆಸರು, ದಿನಾಂಕವಾರು ಸಂಪೂರ್ಣ ವಿವರ ನೀಡುವುದು)

(ಇ) ಕಸ ಸಂಗ್ರಹಣಾ ಕೇಂದ್ರದಲ್ಲಿರುವ ವೇ-ಬ್ರಿಡ್ಜ್‌ನ ನಿರ್ವಹಣೆಯನ್ನು ಪಾಲಿಕೆ ನಿರ್ವಹಿಸುತ್ತಿದೆಯೇ; ಅಥವಾ ಗುತ್ತಿಗೆದಾರರು ನಿರ್ವಹಿಸುತ್ತಾರೆಯೇ; ಇದು ಪ್ರತಿ ವರ್ಷ ತೂಕ ಮತ್ತು ಅಳತೆ ಇಲಾಖೆಯ ತಪಾಸಣೆಗೆ ಒಳಪಟ್ಟಿದೆಯೇ; (ವಿವರಗಳನ್ನು ಒದಗಿಸುವುದು)

(ಈ) ಕಸ ಸಂಗ್ರಹಣೆ ಹಾಗೂ ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?